## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1060
ಸದಸ್ಯರ ಹೆಸರು : ಶ್ರೀ ಶಾಂತಾರಮ್ ಬುಡ್ನ ಸಿದ್ದಿ
ಉತ್ತರಿಸುವ ದಿನಾಂಕ : 20.08.2025
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಉತ್ತರ ಕನ್ನಡ ಜಿಲ್ಲೆಯಲ್ಲಿ ಸೊಪ್ಪಿನ ಬೆಟ್ಟಗಳಲ್ಲಿ ಮನೆ ಕಟ್ಟಿಕೊಳ್ಳುವುದಕ್ಕೆ ಪರವಾನಿಗೆಯನ್ನು ಯಾವುದೇ ತೊಂದರೆ ಇಲ್ಲದೆ ನೀಡಲಾಗುತ್ತದೆಯೇ; ಈಗಾಗಲೇ ಕಟ್ಟಿಕೊಂಡಿರುವ ಮನೆ ಜಾಗಗಳಲ್ಲಿ ಸಕ್ರಮಗೊಳಿಸಲಾಗುತ್ತಿದೆಯೇ; ಈ ಬಗ್ಗೆ ಸರ್ಕಾರದ ಕ್ರಮಗಳಾವುವು; | ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 79(2)ರನ್ವಯ "ಉಪ-ಪ್ರಕರಣ (1)ರಲ್ಲಿ ಏನೇ ಒಳಗೊಂಡಿದ್ದಾಗ್ಯೂ, ಆದರೆ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸಬಹುದಾದಂಥ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೊಳಪಟ್ಟು ರೂಢಿಯಂತೆ ಅಂಥ ಯಾವುದೇ ಆದೇಶದ ಮೇರೆಗೆ ಅನುಭೋಗಿಸಲಾಗುತ್ತಿರುವ ವಿಶೇಷಾಧಿಕಾರಗಳು ಅಂದರೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕುಮ್ಕಿ ಭೂಮಿಗಳು, ಬಾಣೆ ಭೂಮಿಗಳು ಮತ್ತು ಕಾಣೆ ಭೂಮಿಗಳು, ಉತ್ತರ ಕನ್ನಡ ಜಿಲ್ಲೆಯಲ್ಲಿನ ಬೆಟ್ಟ ಭೂಮಿಗಳು ಮತ್ತು ಹಾಡಿ ಭೂಮಿಗಳು, ಮೈಸೂರು ಪ್ರದೇಶದಲ್ಲಿನ ಕಾನು ಮತ್ತು ಸೊಪ್ಪಿನ ಬೆಟ್ಟ ಭೂಮಿಗಳು, ಕೊಡಗಿನ ಜಮ್ಮಾ ಮತ್ತು ಬಾಣೆ ಭೂಮಿಗಳು ಮತ್ತು ಹೈದರಾಬಾದ್ ಪ್ರದೇಶದಲ್ಲಿ ಮೋಟಸ್ಥಲ್ ತರಿ ಭೂಮಿಗಳು ಇವುಗಳ ಬಗೆಗಿನ ವಿಶೇಷಾಧಿಕಾರಗಳು ಮುಂದುವರಿಯತಕ್ಕದ್ದು" ಎಂದು ನಮೂದಿಸಲಾಗಿದೆ. ಅದರಂತೆ, ಇಂತಹ ಜಮೀನುಗಳ ಮಂಜೂರಾತಿಗೆ ಅವಕಾಶವಿರುವುದಿಲ್ಲ. |
| (ಆ) | ಸೊಪ್ಪಿನ ಬೆಟ್ಟದ 'ಬ' ಕರಾಬನ್ನು ತೆಗೆದು ಹಾಕಲು ಸರ್ಕಾರದ ಕ್ರಮಗಳಾವುವು? (ವಿವರ ನೀಡುವುದು) | ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

(ಕಡತ ಸಂಖ್ಯೆ: ಆರ್‌ಡಿ 12 ಎಲ್‌ಜಿಎನ್ 2025)

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು